**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ,**
**ಮೂಡಿಗೆರೆ**
**ಸಿ.ಸಿ.470/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಅಭಿಷೇಕ್ ಬಿ.ಎಂ | ಪ್ರಾಸಾ-8 |
| ತಂದೆಯ ಹೆಸರು | : ಮಂಜುನಾಥ್ | ಚಾಸಾ-5 |
| ವಯಸ್ಸು | : 28 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಡಿಸೈನರ್ | ದಿನಾಂಕಃ 25.02.2026 |
| ವಾಸಸ್ಥಳ | : ಮೂಡಿಗೆರೆ | |

**:ಮುಖ್ಯ ವಿಚಾರಣೆ: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-4 ರವರ ಪರಿಚಯ ನನಗಿಲ್ಲ.

ಸಾಕ್ಷಿಯು ನಿಪಿ-9 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-5 ರ ಫೋಟೋದಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-9(ಬಿ) ಎಂದು ಗುರುತಿಸಲಾಯಿತು.

1 ವರ್ಷದ ಹಿಂದೆ ನಾನು ಮತ್ತು ಚಾಸಾ-4 ರವರು ಮೂಡಿಗೆರೆ ಪೋಲಿಸ್ ಠಾಣೆ ಬಳಿ ಇದ್ದಾಗ ಪೋಲಿಸರು ನಮ್ಮ ಸಹಿಗಳನ್ನು ಪಡೆದು, ಪೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನಮ್ಮ ಸಹಿಯನ್ನು ಪಡೆದು ಪೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-5 ರಲ್ಲಿ ಕಾಣುವ ಬಸ್ ಮತ್ತು ಬೈಕ್ ನ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಿಪಿ-5 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಸಾಕ್ಷಿಗೆ ನಿಪಿ-5 ರ ಸಂಪೂರ್ಣ ವಿಚಾರ ಓದಿ ಹೇಳಲಾಗಿ ಸಾಕ್ಷಿಯು ಅದನ್ನು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ. ನಿಪಿ-5 ರಲ್ಲಿ ಕಾಣುವ ಬೈಕ್ ಮತ್ತು KSRTC ಬಸ್ ನ್ನು ನನ್ನ ಹಾಗೂ ಚಾಸಾ-5 ರವರ ಸಮಕ್ಷಮ ನಿಪಿ-9 ರ ಮಹಜರ್ ನಂತೆ ಮೂಡಿಗೆರೆ ಪೋಲಿಸರು ವಶಕ್ಕೆ ಪಡೆದಿದ್ದಾರೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

C/c ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.470/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಪ್ರಫುಲ ಸೆರಾವೊ | ಪ್ರಾಸಾ-9 |
| ತಂದೆಯ ಹೆಸರು | : ಲಿಗೋರಿ | ಚಾಸಾ-6 |
| ವಯಸ್ಸು | : 30 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಅಡಿಗೆ ಭಟ್ಟ | ದಿನಾಂಕಃ 25.02.2026 |
| ವಾಸಸ್ಥಳ | : ಛತ್ರ ಮೈದಾನ | |

**:ಮುಖ್ಯ ವಿಚಾರಣೆ: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-1, 7 ರಿಂದ 9 ರವರ ಪರಿಚಯ ನನಗಿಲ್ಲ.

ನನಗೆ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಯಾವುದೇ ಘಟನೆಯ ಪ್ರತ್ಯಕ್ಷ ದರ್ಶಿಯಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ಕೊಟ್ಟಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಈಗ ಓದಿ ಹೇಳಿದಂತೆ ದಿ.22.12.2023 ರಂದು ಮೂಡಿಗೆರೆ ಪೋಲಿಸರ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-18 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

C/c ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.